ಪಿ.ಡಬ್ಲ್ಯೂಃ 1

ದಿನಾಂಕ 02-04-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ ಎದುರುಗಾರರ ಪರ ಶ್ರೀ.ಎಂ.ಹೆಚ್.ಹೆಚ್ ವಕೀಲರಿಂದಃ**

5. ಎದುರುಗಾರನಿಗೆ ಮದುವೆ ಸಂದರ್ಭದಲ್ಲಿ ಉಂಗುರ, ಚಿನ್ನದ ಸರ, ಬಾಂಡೆ ಸಾಮಾನುಗಳು ಮತ್ತು ರೂ.5,000/- ನಗದು ಹಣ ನೀಡಲಾಗಿತ್ತು. ಸದರಿ ಸಂಗತಿಯನ್ನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಮದುವೆ ಆದ ನಂತರ ಎದುರುಗಾರನೊಂದಿಗೆ ಸಾಂಸಾರಿಕ ಜೀವನ ನಡೆಸಲು ಹೋದಾಗ ಆತನ ಸಹೋದರಿಯರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದೆ. ಎದುರುಗಾರನಿಗೆ ನನ್ನನ್ನು ಮತ್ತು ಉಳಿದ ಅರ್ಜಿದಾರರನ್ನು ಕಂಡರೆ ಬಹಳ ಪ್ರೀತಿ ಮತ್ತು ವಿಶ್ವಾಸ ಇದೆ ಎಂದರೆ ಸರಿಯಲ್ಲ. ಆತನಿಗೆ ಉತ್ತಮ ಪ್ರೀತಿ ಮತ್ತು ವಿಶ್ವಾಸ ಇದ್ದರೂ ಇಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಎದುರುಗಾರನು ತನ್ನ ತಾಯಿಯ ಚಿತಾವಣೆಯ ಮೇರೆಗೆ ಸುಳ್ಳು ಆರೋಪಗಳನ್ನು ಹೊರಿಸಿ ತೊಂದರೆ ನೀಡಿರುತ್ತಾನೆಂದು ಮುಖ್ಯ ಅರ್ಜಿಯಲ್ಲಿ ಸುಳ್ಳು ಸಂಗತಿಗಳನ್ನು ಬರೆಸಿರುತ್ತೇನೆ ಎಂದರೆ ಸರಿಯಲ್ಲ. ಅದೇ ರೀತಿ ಮುಖ್ಯ ಅರ್ಜಿಯಲ್ಲಿ ಎದುರುಗಾರನು ನನಗೆ ದೈಹಿಕ ಮತ್ತು ಮಾನಸಿಕ ಕಿರುಕುಳ ನೀಡುತ್ತಿದ್ದನು ಎಂದು ಸುಳ್ಳು ಬರೆಸಿರುತ್ತೇನೆ ಎಂದರೆ ಸರಿಯಲ್ಲ.

6. ಆತನು ನನಗೆ ದೈಹಿಕ ಮತ್ತು ಮಾನಸಿಕ ಕಿರುಕುಳ ನೀಡಿದ ಬಗ್ಗೆ ಪೊಲೀಸ್ ಠಾಣೆಯಲ್ಲಿ ಪಿರ್ಯಾದನ್ನು ದಾಖಲಿಸಿರುವುದಿಲ್ಲ ಸಾಕ್ಷಿ ಮುಂದುವರೆದು ಗ್ರಾಮದಲ್ಲಿ ಪಂಚಾಯಿತಿ ಮಾಡಲಾಗಿತ್ತು ಎಂದು ನುಡಿಯುತ್ತಾರೆ. ಗ್ರಾಮ ಪಂಚಾಯಿತಿ ಆಗಿತ್ತು ಎಂದು ಸುಳ್ಳು ಹೇಳುತ್ತಿದ್ದು, ಆತನು ನನ್ನನ್ನು ಯಾವಾಗಲೂ ಚೆನ್ನಾಗಿಯೇ ನೋಡಿಕೊಂಡಿದ್ದನು ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೆ ಸರಿ ಇದೆ ಎಂದು

ಒಪ್ಪಿರುತ್ತಾರೆ.

Sd/-

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ

ಹಾನಗಲ್ಲ.

ಸಾಕ್ಷಿದಾರರ ಸಹಿ